ಅರಣ್ಯ ಇಲಾಖೆಯಿಂದ ಅನುಮತಿ ದೊರೆತ ನಂತರವೇ ಸುಳ್ಯದಲ್ಲಿರುವ 33 ಕೆ.ವಿ. ವಿದ್ಯುತ್ ಉಪ ಕೇಂದ್ರವನ್ನು 110 ಕೆ.ವಿ.ಗೆ ಉನ್ನತೀಕರಿಸಲು ಹಾಗೂ 110 ಕೆ.ವಿ.ಲೈನಿನ ಕೆಲಸಗಳಿಗೆ ಟೆಂಡರ್ ಕರೆಯಬೇಕಾಗಿರುತ್ತದೆ.

ಇ) ಪ್ರಸ್ತಾವನೆ ಇಲ್ಲದಿದ್ದಲ್ಲಿ, ವಿದ್ಯುತ್ ಸಂಪರ್ಕ ಕಲ್ಪಿಸಿ ಸಮಸ್ಯೆಯನ್ನು ನೀಗಿಸಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;

ಮೇಲಿನ ಉತ್ತರದ ಹಿನ್ನಲೆಯಲ್ಲಿ ಪ್ರಶ್ನೆ ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1074(1502)
ಸದಸ್ಯರ ಹೆಸರು : ಶ್ರೀ ಅಂಗಾರ.ಎಸ್.(ಸುಳ್ಯ)
ಉತ್ತರಿಸುವ ಸಚಿವರು : ಶ್ರೀ ಎನ್.ಚಲುವರಾಯಸ್ವಾಮಿ (ಸಾರಿಗೆ ಸಚಿವರು.)

ಅ) ಸುಳ್ಯದ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಕಾಮಗಾರಿ ಈಗ ಯಾವ ಹಂತದಲ್ಲಿದೆ;

ಪೂರ್ಣಗೊಳ್ಳುವ ಹಂತದಲ್ಲಿರುತ್ತದೆ.

ಆ) ಕಾಮಗಾರಿಯ ಅಂದಾಜು ವೆಚ್ಚ ಎಷ್ಟು ಹಾಗೂ ಈ ವರೆಗೆ ವೆಚ್ಚ ಮಾಡಿರುವ ಹಣ ಎಷ್ಟು;

ಈ ಕಾಮಗಾರಿಯ ಟೆಂಡರ್ ವೆಚ್ಚ ಸೇರಿ 55.09 ಲಕ್ಷ ರೂ.ಗಳು ಮತ್ತು ಈ ವರೆವಿಗೂ 51.91 ರೂ.ಗಳನ್ನು ವೆಚ್ಚ ಮಾಡಲಾಗಿದೆ.

ಇ) ಕಾಮಗಾರಿ ಯಾವಾಗ ಮುಕ್ತಾಯವಾಗಲಿದೆ?

2007ನೇ ಏಪ್ರಿಲ್ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1075(1503)
ಸದಸ್ಯರ ಹೆಸರು : ಶ್ರೀ ಅಂಗಾರ.ಎಸ್.(ಸುಳ್ಯ)
ಉತ್ತರಿಸುವ ಸಚಿವರು : ಶ್ರೀ ಎನ್.ಚಲುವರಾಯಸ್ವಾಮಿ (ಸಾರಿಗೆ ಸಚಿವರು.)

ಅ) ಸುಳ್ಯ ತಾಲ್ಲೂಕಿನ ಗ್ರಾಮೀಣ ಪ್ರದೇಶಗಳಿಗೆ ಸರಿಯಾದ ಬಸ್ ಸಂಪರ್ಕ ಕಲ್ಪಿಸುವ ದೃಷ್ಟಿಯಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ ಡಿಪೋ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರಕ್ಕೆ ಇದೆಯೇ;

ಹೌದು.

ಆ) ಬಸ್ ಡಿಪೋ ಅಗತ್ಯತೆಯನ್ನು ಸರ್ಕಾರ ಮನಗಂಡಿದೆಯೇ;